1	2	3
19.	ಉತ್ತರ ಕನ್ನಡ	36.00
20.	ಬಾಗಲಕೋಟೆ	72.50
21.	ಗದಗ	27.00
22.	ಹಾವೇರಿ	45.90
23.	ಗುಲ್ಬರ್ಗಾ	38.50
24.	ಬಳ್ಳಾರಿ	53.90
25.	ಬೀದರ್	19.80
26.	ರಾಯಚೂರು	28.30
27.	ಕೊಪ್ಪಳ	26.70
	ಒಟ್ಟು	1431.27

ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿ ಸರ್ಕಾರಿ ಹೆರಿಗೆ ಆಸ್ಪತ್ರೆ ಕಟ್ಟಡ ನಿರ್ಮಾಣ

495(857) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿರುವ ಸರ್ಕಾರಿ ಹೆರಿಗೆ ಆಸ್ಪತ್ರೆಯ ಕಟ್ಟಡವು ಶಿಥಿಲಗೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಕೂಡಲೇ ಆ ಕಟ್ಟಡವನ್ನು ಕೆಡವಿ ಮುಖ್ಯ ವಾಸ್ತುಶಿಲ್ಪಿಗಳ ಪ್ಲಾನ್ ಪ್ರಕಾರ ಹೊಸ ಕಟ್ಟಡವನ್ನು ಕಟ್ಟಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಅ) ಶಿಥಿಲಗೊಂಡಿರುವುದಿಲ್ಲ. ದುರಸ್ಥಿಯ ಅಗತ್ಯವಿರುತ್ತದೆ. ಆದಾಗ್ಯೂ ಹೊಸ ಕಟ್ಟಡ ನಿರ್ಮಾಣಕ್ಕೆ ಸಹಾಯಕ ಅಭಿಯಂತರರು, ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ಉಪ ವಿಭಾಗ, ಬೈಲಹೊಂಗಲ ಇವರಿಗೆ ನೀಲಿ ನಕ್ಷೆ ಅಂದಾಜು ಪಟ್ಟಿ ತಯಾರಿಸಲು ಸೂಚಿಸಲಾಗಿದೆ. ಜಿಲ್ಲಾ ಪಂಚಾಯಿತಿಯಿಂದ ಅನುದಾನ ಪಡೆದುಕೊಂಡು ಕ್ರಮ ಕೈಗೊಳ್ಳಲಾಗುವುದು ಈ ಮಧ್ಯದಲ್ಲಿ ದುರಸ್ಥಿಗೆ ಶೀಘ್ರ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರು, ಜಿಲ್ಲಾ ಪಂಚಾಯತ್, ಬೈಲಹೊಂಗಲ ಇವರಿಗೆ ಕೋರಲಾಗಿದೆ.